## ಕರ್ನಾಟಕ ಸರ್ಕಾರ

ಸಂ: ಹಿಂವಕ 122 ಬಿಇಟಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:17.04.2021

## ಸುತ್ತೋಲೆ

**ವಿಷಯ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಎಲ್ಲಾ ವೃಂದಗಳಲ್ಲಿ ನೇರ ನೇಮಕಾತಿ/ ಮುಂಬಡ್ತಿ ಅಡಿಯಲ್ಲಿ ಸ್ಥಳ ನಿಯುಕ್ತಿಗೊಳಿಸುವಾಗ ಕಡ್ಡಾಯವಾಗಿ ಕೌನ್ಸಲಿಂಗ್ ಪದ್ಧತಿಯನ್ನು ಅನುಸರಿಸುವ ಬಗ್ಗೆ.

***

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಸಿಬ್ಬಂದಿಗಳ ಕಲ್ಯಾಣಕ್ಕಾಗಿ ಮತ್ತು ಪಾರದರ್ಶಕ ಆಡಳಿತ ನೀಡುವ ಸಲುವಾಗಿ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ.

1. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿನ ಆಯುಕ್ತಾಲಯ ಮತ್ತು ಎಲ್ಲಾ ನಿಗಮಗಳ ವೃಂದವಾರು ಜೇಷ್ಠತಾ ಪಟ್ಟಿಯನ್ನು ಕೂಡಲೇ ಸಂಬಂಧಿತ ಆಯುಕ್ತಾಲಯ/ನಿಗಮದ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.
2. ವೃಂದವಾರು ಪ್ರತಿ ಹುದ್ದೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯ ವಿವರಗಳನ್ನು ಸಂಬಂಧಿತ ಆಯುಕ್ತಾಲಯ/ನಿಗಮದ ವೆಬ್ ಸೈಟ್‌ನಲ್ಲಿ ಕೂಡಲೇ ಪ್ರಕಟಿಸುವುದು. ಅದೇ ರೀತಿ ವೃಂದವಾರು/ಹುದ್ದೆವಾರು ಖಾಲಿ ಹುದ್ದೆಗಳ ವಿವರಗಳನ್ನು ಕೂಡಲೇ ಪ್ರಕಟಿಸುವುದು. ಸದರಿ ಮಾಹಿತಿಯಲ್ಲಿ ಆಗುವ ಬದಲಾವಣೆಗಳನ್ನು ಕಾಲ ಕಾಲಕ್ಕೆ ಸಂಬಂಧಿತ ಆಯುಕ್ತಾಲಯ/ನಿಗಮದ ವೆಬ್ ಸೈಟ್‌ನಲ್ಲಿ ಇಂದೀಕರಿಸುವುದು.
3. ಎಲ್ಲಾ ವೃಂದಗಳಲ್ಲಿ ಮುಂಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸುವಾಗ ಕಡ್ಡಾಯವಾಗಿ ಕೌನ್ಸಿಲಿಂಗ್ ಪದ್ಧತಿಯನ್ನು ಅನುಸರಿಸಿ ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ ಜೆಷ್ಠತಾ ಪಟ್ಟಿ ಅನುಸಾರ ಕಾರ್ಯ ಸ್ಥಳ ಆಯ್ಕೆ ಮಾಡಲು ಪಾರದರ್ಶಕವಾಗಿ ಅವಕಾಶ ಮಾಡುವುದು. ಈ ರೀತಿಯಾಗಿ ಅವಕಾಶ ಕಲ್ಪಿಸಲು ಖಾಲಿ ಹುದ್ದೆಗಳ ವಿವರವನ್ನು ಸಂಬಂಧಪಟ್ಟ ಕಛೇರಿ ಮುಖ್ಯಸ್ಥರ ಸಹಿಯೊಂದಿಗೆ ಆಯುಕ್ತಾಲಯ/ನಿಗಮದ ವೆಬ್ ಸೈಟ್‌ನಲ್ಲಿ ಎಲ್ಲಾ ಅಧಿಕಾರಿಗಳ/ಸಿಬ್ಬಂದಿಗಳ ಮಾಹಿತಿಗಾಗಿ ಪ್ರಕಟಿಸಿ ಜೇಷ್ಠತಾ ಪಟ್ಟಿಯ ಪ್ರಕಾರ ಅಧಿಕಾರಿ/ಸಿಬ್ಬಂದಿಗಳಿಗೆ ಕೌನ್ಸಲಿಂಗ್ ನಡೆಸುವುದು. ಕೌನ್ಸಲಿಂಗ್ ನಡೆಸಿದ ದಿನವೇ ಸ್ಥಳ ನಿಯುಕ್ತಿ ಆದೇಶಗಳನ್ನು ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ ನೀಡುವುದು.
4. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಆಯುಕ್ತಾಲಯ ಮತ್ತು ಎಲ್ಲಾ ನಿಗಮಗಳಿಗೆ ನೇರ ನೇಮಕಾತಿಯ ಮೂಲಕ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸುವಾಗ ಕಡ್ಡಾಯವಾಗಿ ಕೌನ್ಸಲಿಂಗ್ ಪದ್ಧತಿಯನ್ನು ಅನುಸರಿಸಿ ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ ಮೆರಿಟ್ ಪಟ್ಟಿ ಅನುಸಾರ ಕಾರ್ಯ ಸ್ಥಳ ಆಯ್ಕೆ ಮಾಡಲು

-2-

ಪಾರದರ್ಶಕವಾಗಿ ಅವಕಾಶ ಮಾಡುವುದು. ಈ ರೀತಿಯಾಗಿ ಅವಕಾಶ ಕಲ್ಪಿಸಲು ಸಂಬಂಧಪಟ್ಟ ಕಚೇರಿ ಮುಖ್ಯಸ್ಥರ ಸಹಿಯೊಂದಿಗೆ ಖಾಲಿ ಹುದ್ದೆಗಳ ವಿವರವನ್ನು ಸಂಬಂಧಪಟ್ಟ ಆಯುಕ್ತಾಲಯ/ನಿಗಮದ ವೆಬ್ ಸೈಟ್‌ನಲ್ಲಿ ಎಲ್ಲರ ಮಾಹಿತಿಗಾಗಿ ಪ್ರಕಟಿಸುವುದು. ಮೆರಿಟ್ ಪಟ್ಟಿ ಪ್ರಕಾರ ಅಧಿಕಾರಿ/ಸಿಬ್ಬಂದಿಗಳಿಗೆ ಕೌನ್ಸಲಿಂಗ್ ನಡೆಸುವುದು. ಕೌನ್ಸಲಿಂಗ್ ನಡೆಸಿದ ದಿನವೇ ಸ್ಥಳ ನಿಯುಕ್ತಿ ಆದೇಶವನ್ನು ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ ನೀಡುವುದು.

5. ಮೇಲಿನ ಎಲ್ಲಾ ಅಂಶಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತಾಲಯದಲ್ಲಿ ಹಾಗೂ ಎಲ್ಲಾ ನಿಗಮಗಳಲ್ಲಿ ಕಡ್ಡಾಯವಾಗಿ ಪಾಲಿಸುವ ನೇರ ಜವಾಬ್ದಾರಿ ಸಂಬಂಧಪಟ್ಟ ಕಚೇರಿಯ ಮುಖ್ಯಸ್ಥರದ್ದಾಗಿರುತ್ತದೆ.

V. Akkamahadevi 17/4/2

(ವಿ.ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಸಂತನಗರ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರುಗಳು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ / ಕರ್ನಾಟಕ ಆರ್ಯವೈಶ್ಯ ಅಭಿವೃದ್ಧಿ ನಿಗಮ / ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ / ಕರ್ನಾಟಕ ಮರಾಠ ಅಭಿವೃದ್ಧಿ ನಿಗಮ / ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ /
   ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಕರ್ನಾಟಕ ಕಾಡುಗೊಲ್ಲ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ/ಅರೆಅಲೆಮಾರಿ ಅಭಿವೃದ್ಧಿ ನಿಗಮ / ಕರ್ನಾಟಕ ಸವಿತ ಸಮಾಜ ಅಭಿವೃದ್ಧಿ ನಿಗಮ / ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ / ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಬೆಂಗಳೂರು.
3. ಆಯುಕ್ತರು, ಸಂಗೊಳ್ಳಿರಾಯಣ್ಣ ಪ್ರಾಧಿಕಾರ, ಬೆಳಗಾವಿ.
4. ಎಲ್ಲಾ ಜಿಲ್ಲಾ ಅಧಿಕಾರಿಗಳಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ
5. ಜಿಲ್ಲಾ ವ್ಯವಸ್ಥಾಪಕರಿಗೆ ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಮುಖಾಂತರ
6. ಸರ್ಕಾರದ ಅಧೀನ ಕಾರ್ಯದರ್ಶಿ-1, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ-ಇಲಾಖೆಯ ವೆಬ್ ಸೈಟ್‌ನಲ್ಲಿ ಸದರಿ ಮಾಹಿತಿಯನ್ನು ಇಂದೀಕರಿಸುವುದು.

(5) 19/4/21

**ಪ್ರತಿ:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
3. ಸರ್ಕಾರದ ಅಪರ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ.

19/4/21